National
Kannada
28.03.2026: 7.35AM
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು :

1. ಪಶ್ಚಿಮ ಏಷ್ಯಾ ಸಂಘರ್ಷ; ದೇಶದ ನಾಗರಿಕರ ಹಿತರಕ್ಷಣೆಗಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಒಂದಾಗಿ ಕಾರ್ಯ ನಿರ್ವಹಿಸುವಂತೆ ಪ್ರಧಾನಿ ನರೇಂದ್ರ ಮೋದಿ ಕರೆ
2. ಉತ್ತರಪ್ರದೇಶದಲ್ಲಿಂದು ನೋಯ್ಡಾ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದ ಹಂತ-೧ಅನ್ನು ಉದ್ಘಾಟಿಸಲಿರುವ ಪ್ರಧಾನಿ
3. ಮತದಾರರ ಪಟ್ಟಿಯ ನಿಖರತೆ, ಪಾರದರ್ಶಕತೆ ಖಚಿತಪಡಿಸುವುದು ಎಸ್‌ಐಆರ್ ಪ್ರಕ್ರಿಯೆಯ ಉದ್ದೇಶ - ಕೇಂದ್ರ ಸಚಿವ ಅಮಿತ್ ಶಾ
4. ಜಿ-೭ ವಿದೇಶಾಂಗ ಸಚಿವರ ಸಭೆ; ಸಮುದ್ರಯಾನ ಸ್ವಾತಂತ್ರ್ಯದ ಮಹತ್ವವನ್ನು ಒತ್ತಿಹೇಳಿದ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್
5. ಬೆಂಗಳೂರಿನಲ್ಲಿಂದು ೧೯ನೇ ಆವೃತ್ತಿಯ ಇಂಡಿಯನ್ ಪ್ರೀಮಿಯರ್ ಲೀಗ್ ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಗೆ ಚಾಲನೆ

**********

ಪಶ್ಚಿಮ ಏಷ್ಯಾದಲ್ಲಿ ಉದ್ಭವಿಸಿರುವ ಸಂಘರ್ಷದ ಹಿನ್ನೆಲೆಯಲ್ಲಿ ದೇಶದ ಆರ್ಥಿಕ ಸ್ಥಿರತೆ, ಇಂಧನ ಭದ್ರತೆ ಮತ್ತು ನಾಗರಿಕರ ಹಿತರಕ್ಷಣೆಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಒಂದು ತಂಡದ ಭಾವನೆಯೊಂದಿಗೆ ಕಾರ್ಯ ನಿರ್ವಹಿಸಬೇಕು ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಕರೆ ನೀಡಿದ್ದಾರೆ. ನಿನ್ನೆ ಸಂಜೆ ವಿವಿಧ ರಾಜ್ಯಗಳ ಮುಖ್ಯಮಂತ್ರಿಗಳು ಹಾಗೂ ಕೇಂದ್ರಾಡಳಿತ ಪ್ರದೇಶಗಳ ಲೆಫ್ಟಿನೆಂಟ್ ಗವರ್ನರ್‌ಗಳೊಂದಿಗಿನ ವರ್ಚುವಲ್ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ಸಂಕಷ್ಟದ ಸಮಯದಲ್ಲಿ ದೇಶದ ಆರ್ಥಿಕ ಮತ್ತು ವ್ಯಾಪಾರ ಸ್ಥಿರತೆ, ಇಂಧನ ಭದ್ರತೆ, ಪೂರೈಕೆ ಸರಪಳಿ ಮತ್ತು ಕೈಗಾರಿಕಾ ವಲಯದ ಹಿತಾಸಕ್ತಿಗಳನ್ನು ಕಾಪಾಡುವುದು ಸರ್ಕಾರದ ಪ್ರಥಮ ಆದ್ಯತೆಯಾಗಿದೆ ಎಂದು ಪುನರುಚ್ಚರಿಸಿದರು. ಕೋವಿಡ್ ಸಾಂಕ್ರಾಮಿಕದ ಸಮಯದಲ್ಲಿ ಕೇಂದ್ರ ಹಾಗೂ ರಾಜ್ಯಗಳು ಒಟ್ಟಾಗಿ ಕೆಲಸ ಮಾಡಿದ ಮಾದರಿಯಲ್ಲಿಯೇ ಈಗಿನ ಜಾಗತಿಕ ಸವಾಲುಗಳನ್ನು ಎದುರಿಸಲು ಪರಸ್ಪರ ಸಂವಹನ ಮತ್ತು ಸಮನ್ವಯ ಅತ್ಯಗತ್ಯ ಎಂದ ಅವರು, ತೈಲ ಮತ್ತು ಅನಿಲ ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಾಗದಂತೆ ನಿಗಾವಹಿಸಲು ಹಾಗೂ ಕೃತಕ ಅಭಾವ

ಸೃಷ್ಟಿಸುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ರಾಜ್ಯಗಳಿಗೆ ಸೂಚಿಸಿದರು. ಮುಂಬರುವ ಮುಂಗಾರು ಹಂಗಾಮಿಗೆ ಮುಂಚಿತವಾಗಿ ರೈತರಿಗೆ ಅಗತ್ಯವಿರುವ ರಸಗೊಬ್ಬರವನ್ನು ಖಚಿತಪಡಿಸಿಕೊಳ್ಳಲು ಅಗತ್ಯವಿರುವ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು ಹಾಗೂ ಪಶ್ಚಿಮ ಏಷ್ಯಾದಲ್ಲಿ ನೆಲೆಸಿರುವ ಭಾರತೀಯ ಕುಟುಂಬಗಳಿಗೆ ನೆರವಾಗಲು ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ಸಹಾಯವಾಣಿಗಳನ್ನು ಸಕ್ರಿಯಗೊಳಿಸಬೇಕು ಎಂದರು. ಕೇಂದ್ರ ಸರ್ಕಾರದ ರಾಜತಾಂತ್ರಿಕ ಪ್ರಯತ್ನಗಳು ಮತ್ತು ಮುನ್ನೆಚ್ಚರಿಕಾ ಕ್ರಮಗಳು ದೇಶದ ಆರ್ಥಿಕತೆಗೆ ಬಲ ನೀಡಲಿವೆ ಎಂದು ವಿಶ್ವಾಸ ವ್ಯಕ್ತಪಡಿಸಿದ ಉಪಸ್ಥಿತ ಮುಖ್ಯಮಂತ್ರಿಗಳು, ಬದಲಾಗುತ್ತಿರುವ ಈ ಪರಿಸ್ಥಿತಿ ಎದುರಿಸಲು ಕೇಂದ್ರ ಸರ್ಕಾರಕ್ಕೆ ಸಂಪೂರ್ಣ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

**********

ಉತ್ತರ ಪ್ರದೇಶದ ಜೇವರ್‌ನಲ್ಲಿರುವ ನೋಯ್ಡಾ ಅಂತರಾಷ್ಟ್ರೀಯ ವಿಮಾನ ನಿಲ್ದಾಣದ ಹಂತ-೧ಅನ್ನು ಪ್ರಧಾನಿ ನರೇಂದ್ರ ಮೋದಿ ಇಂದು ಉದ್ಘಾಟಿಸಲಿದ್ದಾರೆ. ಈ ವಿಮಾನ ನಿಲ್ದಾಣವನ್ನು ಸುಮಾರು ೧೧ ಸಾವಿರದ ೨೦೦ ಕೋಟಿ ರೂಪಾಯಿ ಮೌಲ್ಯದ ಒಟ್ಟು ಹೂಡಿಕೆಯೊಂದಿಗೆ ಅಭಿವೃದ್ಧಿಪಡಿಸಲಾಗುತ್ತಿದೆ. ಈ ವಿಮಾನ ನಿಲ್ದಾಣದ ಉದ್ಘಾಟನೆ ಜಾಗತಿಕ ವಿಮಾನಯಾನ ಕೇಂದ್ರವಾಗುವತ್ತ ಸಾಗಿರುವ ಭಾರತದ ಪಯಣದಲ್ಲಿ ಒಂದು ಪ್ರಮುಖ ಮೈಲಿಗಲ್ಲಾಗಿದೆ.

**********

ನಕಲಿ ದಾಖಲೆಗಳ ಆಧಾರದ ಮೇಲೆ ಮತದಾರರ ಪಟ್ಟಿಯಲ್ಲಿ ಸೇರ್ಪಡೆಗೊಂಡಿರುವ ನುಸುಳುಕೋರರ ಹೆಸರುಗಳನ್ನು ತೆಗೆದು ಹಾಕುವುದು ಮತದಾರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಯ ಮುಖ್ಯ ಉದ್ದೇಶವಾಗಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ. ನವದೆಹಲಿಯಲ್ಲಿ ಖಾಸಗಿ ಮಾಧ್ಯಮ ಶೃಂಗಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಮತದಾರರ ಪಟ್ಟಿಯ ನಿಖರತೆ ಮತ್ತು ಪಾರದರ್ಶಕತೆಯನ್ನು ಖಚಿತಪಡಿಸಿಕೊಳ್ಳುವುದು ಈ ಪ್ರಕ್ರಿಯೆಯ ಗುರಿಯಾಗಿದೆ. ತಮಿಳುನಾಡು ಮತ್ತು ಕೇರಳ ಸೇರಿದಂತೆ ಹಲವು ರಾಜ್ಯಗಳಲ್ಲಿ ಈ ಪ್ರಕ್ರಿಯೆ ಯಾವುದೇ ಅಡೆತಡೆ ಇಲ್ಲದೆ ನಡೆದಿದ್ದು, ಪಶ್ಚಿಮಬಂಗಾಳದಿಂದ ಮಾತ್ರ ಆಕ್ಷೇಪಣೆಗಳು ವ್ಯಕ್ತವಾಗಿವೆ ಎಂದು ತಿಳಿಸಿದರು. ಪಶ್ಚಿಮ ಏಷ್ಯಾ ಬಿಕ್ಕಟ್ಟಿನ ಬಗ್ಗೆಯೂ ಪ್ರಸ್ತಾಪಿಸಿದ ಅವರು, ಜಾಗತಿಕ ಅಸ್ಥಿರತೆಯ ನಡುವೆಯೂ ಭಾರತದಲ್ಲಿ ದೈನಂದಿನ ಜೀವನದ ಮೇಲೆ ಯಾವುದೇ ಪರಿಣಾಮ ಬೀರದಂತೆ ಕೇಂದ್ರ ಸರ್ಕಾರ ಬಿಕ್ಕಟ್ಟನ್ನು ಪರಿಣಾಮಕಾರಿಯಾಗಿ ನಿರ್ವಹಿಸಿದೆ ಎಂದರು.

**********

ಪಶ್ಚಿಮ ಬಂಗಾಳದ ವಿವಿಧ ಭಾಗಗಳಲ್ಲಿ ಸಂಭವಿಸಿರುವ ಹಿಂಸಾಚಾರ ಮತ್ತು ಅಶಾಂತಿಕಾರ ಘಟನೆಗಳ ಹಿನ್ನೆಲೆಯಲ್ಲಿ ಚುನಾವಣಾ ಆಯೋಗ ಪೊಲೀಸ್ ಆಡಳಿತದ ಮೇಲೆ ಕಣ್ಗಾವಲನ್ನು ತೀವ್ರಗೊಳಿಸಿದೆ. ಮುಂದಿನ ತಿಂಗಳು ನಡೆಯಲಿರುವ ವಿಧಾನಸಭಾ ಚುನಾವಣೆಯ ಮುನ್ನ ಮುನ್ನೆಚ್ಚರಿಕೆ ವಹಿಸಲು ಎಲ್ಲಾ ಹಂತದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯ ನಿರ್ದೇಶನದಂತೆ ಎಲ್ಲಾ ಜಾಮೀನುರಹಿತ ಬಂಧನ ವಾರಂಟ್‌ಗಳನ್ನು ಜಾರಿಗೊಳಿಸಬೇಕು ಮತ್ತು ತಲೆಮರೆಸಿಕೊಂಡಿರುವ ಆರೋಪಿಗಳನ್ನು ಬಂಧಿಸಲು ವಿಶೇಷ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಲಾಗಿದೆ. ಪಶ್ಚಿಮ ಬಂಗಾಳದಲ್ಲಿ ಏಪ್ರಿಲ್ ೨೩ ಮತ್ತು ೨೯ರಂದು ಎರಡು ಹಂತಗಳಲ್ಲಿ ಮತದಾನ ನಡೆಯಲಿದ್ದು, ಮೊದಲ ಹಂಚದ ಚುನಾವಣೆಗೆ ಇದೇ ೩೦ರಂದು ಅಧಿಸೂಚನೆ ಹೊರಬೀಳಲಿದೆ.

**********

ಫ್ರಾನ್ಸ್‌ನಲ್ಲಿ ನಡೆದ ಜಿ-೭ ವಿದೇಶಾಂಗ ಸಚಿವರ ಸಭೆಯ ಸಂದರ್ಭದಲ್ಲಿ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ಜಾಗತಿಕ ಆರ್ಥಿಕ ಭದ್ರತೆಗಾಗಿ ಸಮುದ್ರಯಾನ ಸ್ವಾತಂತ್ರ್ಯದ ಮಹತ್ವವನ್ನು ಒತ್ತಿ ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಡಾ. ಜೈಶಂಕರ್, ಸಭೆಯಲ್ಲಿ ನಿರ್ಣಾಯಕ ಖನಿಜಗಳ ಮೌಲ್ಯ ಸರಪಳಿಯಲ್ಲಿ ಸಹಕಾರವನ್ನು ವಿಸ್ತರಿಸಲು ನಡೆಯುತ್ತಿರುವ ಕ್ರಮಗಳನ್ನು ಶ್ಲಾಘಿಸಿದ್ದಾರೆ ಮತ್ತು ಮಾದಕ ದ್ರವ್ಯ - ಭಯೋತ್ಪಾದನಾ ಸಂಪರ್ಕಗಳ ಬೆದರಿಕೆಯ ಬಗ್ಗೆ ಚರ್ಚಿಸಿದ್ದಾರೆ ಎಂದು ಹೇಳಿದರು. ಇದಕ್ಕೂ ಮೊದಲು, ವಿದೇಶಾಂಗ ಸಚಿವರು ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ.

ಸೌದಿ ಅರೇಬಿಯಾದ ಫೈಸಲ್ ಬಿನ್ ಫರ್ಹಾನ್ ಅವರೊಂದಿಗಿನ ಭೇಟಿಯ ಸಂದರ್ಭದಲ್ಲಿ, ಡಾ. ಜೈಶಂಕರ್ ಅವರು ಪಶ್ಚಿಮ ಏಷ್ಯಾದ ಕುರಿತು ಅವರ ವಿಚಾರಗಳನ್ನು ಶ್ಲಾಘಿಸಿದರು ಹಾಗೂ ಎರಡೂ ದೇಶಗಳ ನಡುವಿನ ದ್ವಿಪಕ್ಷೀಯ ಸಹಕಾರದ ಬಗ್ಗೆಯೂ ಚರ್ಚಿಸಿದ್ದಾರೆ. ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ಇಟಲಿಯ ಉಪಪ್ರಧಾನಿ ಮತ್ತು ವಿದೇಶಾಂಗ ಸಚಿವ ಆಂಟೋನಿಯೊ ತಜಾನಿ, ಐರೋಪ್ಯ ಆಯೋಗದ ಉಪಾಧ್ಯಕ್ಷ ಕಾಜಾ ಕಲ್ಲಾಸ್, ಉಕ್ರೇನ್ ವಿದೇಶಾಂಗ ಸಚಿವ ಆಂಡ್ರಿ ಸಿಬಿಹಾ ಮತ್ತು ಜರ್ಮನಿಯ ವಿದೇಶಾಂಗ ಸಚಿವ ಜೋಹಾನ್ ವಾಡೆಫುಲ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ.

**********

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ನಾಳೆ ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಅವರು, ದೇಶ ಮತ್ತು ವಿದೇಶಗಳ ಭಾರತೀಯರನ್ನುದ್ದೇಶಿಸಿ ತಮ್ಮ ಮನದ ಮಾತನ್ನು ಹಂಚಿಕೊಳ್ಳಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೨ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ.  ಇದನ್ನು ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮವನ್ನು ಪ್ರಸಾರ ಮಾಡಲಾಗುವುದು.

**********

ವಿಶ್ವ ವ್ಯಾಪಾರ ಸಂಸ್ಥೆಯ ನಿರ್ಧಾರ ಕೈಗೊಳ್ಳುವ ಪ್ರಕ್ರಿಯೆಯಲ್ಲಿ ಒಮ್ಮತವನ್ನು ಮರುಸ್ಥಾಪಿಸಲು ಸದಸ್ಯ ರಾಷ್ಟ್ರಗಳ ನಡುವೆ ವಿಶ್ವಾಸ ವೃದ್ಧಿಸುವುದು ಅತ್ಯಗತ್ಯ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಪ್ರತಿಪಾದಿಸಿದ್ದಾರೆ. ಕ್ಯಾಮರೂನ್‌ನಲ್ಲಿ ನಡೆಯುತ್ತಿರುವ ವಿಶ್ವ ವ್ಯಾಪಾರ ಸಂಸ್ಥೆಯ ೧೪ನೇ ಸಚಿವ ಮಟ್ಟದ ಸಮ್ಮೇಳನದ ಅಧಿವೇಶನವನ್ನು ಉದ್ದೇಶಿಸಿ ಅವರು ಮಾತನಾಡಿದರು. ಸಮ್ಮೇಳನದಲ್ಲಿ ಮಾತನಾಡಿದ ಸಚಿವರು, ಡಬ್ಲ್ಯೂಟಿಒದ ಸಾಂಸ್ಥಿಕ ಚೌಕಟ್ಟು ಸುದೃಢವಾಗಿದ್ದಾಗ ಮಾತ್ರ ಬಹುಪಕ್ಷೀಯ ವ್ಯಾಪಾರ ವ್ಯವಸ್ಥೆಯು ಅಭಿವೃದ್ಧಿ ಹೊಂದಲು ಸಾಧ್ಯ ಎಂದು ತಿಳಿಸಿದರು. ಪ್ರಸ್ತುತ ಎದುರಾಗಿರುವ ಬಿಕ್ಕಟ್ಟುಗಳನ್ನು ಪರಿಹರಿಸಲು ಪಾರದರ್ಶಕ ಮತ್ತು ಒಳಗೊಳ್ಳುವಿಕೆಯ ಚರ್ಚೆಗಳು ನಡೆಯಬೇಕು ಹಾಗೂ ಸದಸ್ಯ ರಾಷ್ಟ್ರಗಳ ಆಶೋತ್ತರಗಳಿಗೆ ಪೂರಕವಾಗಿ ನಿರ್ಧಾರಗಳನ್ನು ತೆಗೆದುಕೊಳ್ಳಬೇಕು ಎಂದು ಅವರು ಒತ್ತಿ ಹೇಳಿದರು. ಈ ಕುರಿತು ಸಾಮಾಜಿಕ ಜಾಲತಾಣದಲ್ಲೂ ಮಾಹಿತಿ ಹಂಚಿಕೊಂಡಿರುವ ಅವರು, ಡಬ್ಲ್ಯೂಟಿಒ ಸುಧಾರಣೆಗಳ ಕುರಿತು ಭಾರತದ ನಿಲುವನ್ನು ಸ್ಪಷ್ಟಪಡಿಸಿದ್ದಾರೆ.

**********

ಪಶ್ಚಿಮ ಏಷ್ಯಾದಲ್ಲಿ ಉದ್ವಿಗ್ನತೆ ಮತ್ತಷ್ಟು ಹೆಚ್ಚಾಗಿದ್ದು, ಇಸ್ರೇಲ್ ಕಳೆದ ರಾತ್ರಿ ಇರಾನ್‌ನ ಪ್ರಮುಖ ಉಕ್ಕು ಕಾರ್ಖಾನೆಗಳು, ವಿದ್ಯುತ್ ಸ್ಥಾವರಗಳು ಮತ್ತು ಪರಮಾಣು ಕೇಂದ್ರಗಳ ಮೇಲೆ ದಾಳಿಗಳನ್ನು ತೀವ್ರಗೊಳಿಸಿತು. ಇಸ್ರೇಲ್‌ನ ಈ ಕ್ರಮವನ್ನು ಟೆಹ್ರಾನ್ ತೀವ್ರವಾಗಿ ಖಂಡಿಸಿದ್ದು, ಈ ಕ್ರಮ ರಾಜತಾಂತ್ರಿಕ ಪ್ರಯತ್ನಗಳಿಗೆ ಹಿನ್ನಡೆಯಾಗಿದೆ ಎಂದು ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಾಗ್ಚಿ ಎಚ್ಚರಿಸಿದ್ದಾರೆ. ಈ ಸಂಘರ್ಷದ ನಡುವೆ, ವಿಶ್ವದ ಅತ್ಯಂತ ಜನನಿಬಿಡ ತೈಲ ಸಾಗಣೆ ಮಾರ್ಗವಾದ ಹಾರ್ಮುಜ್ ಜಲಸಂಧಿಯ ಮೂಲಕ ಮಾನವೀಯ ನೆರವು ಮತ್ತು ಕೃಷಿ ಉತ್ಪನ್ನಗಳ

ಸಾಗಾಣೆಗೆ ಇರಾನ್ ಒಪ್ಪಿಗೆ ಸೂಚಿಸಿದೆ. ವಿಶ್ವಸಂಸ್ಥೆಯ ಮನವಿಯ ಮೇರಗೆ ಈ ನಿರ್ಧಾರ ತೆಗೆದುಕೊಳ್ಳಲಾಗಿದ್ದು, ಸಂಘರ್ಷದ ನಡುವೆಯೂ ಅಗತ್ಯ ವಸ್ತುಗಳ ಪೂರೈಕೆಗೆ ಇರಾನ್ ಸಹಕರಿಸಲಿದೆ ಎಂದು ಜಿನಿವಾದಲ್ಲಿರುವ ಇರಾನ್ ರಾಯಭಾರಿ ಅಲಿ ಬಹ್ರೇನಿ ತಿಳಿಸಿದ್ದಾರೆ.

**********

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಇಂದು ಜಾರ್ಖಂಡ್ ಪ್ರವಾಸ ಕೈಗೊಳ್ಳಲಿದ್ದಾರೆ. ತಮ್ಮ ಭೇಟಿ ವೇಳೆ ಅವರು, ಖುಂಟಿ ಜಿಲ್ಲೆಯ ಉಲಿಹಟು ಗ್ರಾಮದಲ್ಲಿರುವ ಭಗವಾನ್ ಬಿರ್ಸಾ ಮುಂಡಾ ಅವರ ಜನ್ಮಸ್ಥಳದಲ್ಲಿ ಅವರಿಗೆ ಗೌರವ ನಮನ ಸಲ್ಲಿಸಲಿದ್ದಾರೆ. ಬಳಿಕ ಅವರು, ಇಂಡಿಯನ್ ಇನ್ಸ್‌ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್- ಐಐಎಂ ರಾಂಚಿಯ ೧೫ನೇ ವಾರ್ಷಿಕ ಘಟಿಕೋತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ.

**********

೧೯ನೇ ಆವೃತ್ತಿಯ ಇಂಡಿಯನ್ ಪ್ರೀಮಿಯರ್ ಲೀಗ್ - ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಗೆ ಇಂದು ಅದ್ಧೂರಿ ಚಾಲನೆ ದೊರೆಯಲಿದೆ. ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಲಿರುವ ಉದ್ಘಾಟನಾ ಪಂದ್ಯದಲ್ಲಿ ಹಾಲಿ ಚಾಂಪಿಯನ್ ರಾಯಲ್ ಚಾಲೆಂಜರ್ಸ್ ಬೆಂಗಳೂರು - ಆರ್‌ಸಿಬಿ ಹಾಗೂ ಸನ್‌ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ. ಆ ಮೂಲಕ ಮೇ ೩೧ರ ವರೆಗೆ ನಡೆಯಲಿರುವ ಎರಡು ತಿಂಗಳ ಅವಧಿಯ ಈ ಟೂರ್ನಿ ಆರಂಭವಾಗಲಿದೆ.

**********

ರಾಷ್ಟ್ರ ರಾಜಧಾನಿಯನ್ನು ಮಾಧ್ಯಮ ಮತ್ತು ಮನರಂಜನಾ ವಲಯದ ಜಾಗತಿಕ ಕೇಂದ್ರವಾಗಿ ಅಭಿವೃದ್ಧಿಪಡಿಸಲು ದೆಹಲಿ ಸರ್ಕಾರ ಪ್ರಸಾರ ಭಾರತಿಯೊಂದಿಗೆ ತಿಳುವಳಿಕಾ ಒಪ್ಪಂದಕ್ಕೆ ಸಹಿ ಹಾಕಿದೆ. ನವದೆಹಲಿಯ ಭಾರತ್ ಮಂಟಪದಲ್ಲಿ ನಿನ್ನೆ ನಡೆದ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ಸಂದರ್ಭದಲ್ಲಿ ದೆಹಲಿ ಪ್ರವಾಸೋದ್ಯಮ ಮತ್ತು ಸಾರಿಗೆ ಅಭಿವೃದ್ಧಿ ನಿಗಮದ ಮೂಲಕ ಈ ಒಪ್ಪಂದವನ್ನು ಕೈಗೊಳ್ಳಲಾಯಿತು. ಚಲನಚಿತ್ರ, ದೂರದರ್ಶನ, ಅನಿಮೇಷನ್, ವಿಜುಯಲ್ ಎಫೆಕ್ಟ್ಸ್, ಗೇಮಿಂಗ್ ಮತ್ತು ಕಾಮಿಕ್ಸ್ ಸೇರಿದಂತೆ ಮಾಧ್ಯಮ ಕ್ಷೇತ್ರದ ಪ್ರಮುಖ ವಿಭಾಗಗಳನ್ನು ಒಂದೇ ವೇದಿಕೆಯಲ್ಲಿ ಒಟ್ಟುಗೂಡಿಸುವ ಅತ್ಯಾಧುನಿಕ ಸಂಯೋಜಿತ ಪರಿಸರ ವ್ಯವಸ್ಥೆಯನ್ನು ರಚಿಸುವ ಗುರಿಯನ್ನು ಈ ಉಪಕ್ರಮ ಹೊಂದಿದೆ. ಈ ಸಂದರ್ಭದಲ್ಲಿ ಮಾತನಾಡಿದ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ, ದೆಹಲಿಯನ್ನು ಜಾಗತಿಕ ಮಾಧ್ಯಮ ಮತ್ತು ಮನರಂಜನಾ

ಕೇಂದ್ರವಾಗಿ ಇರಿಸುವಲ್ಲಿ ಈ ಉಪಕ್ರಮವು ಒಂದು ಮೈಲಿಗಲ್ಲು ಎಂದು ಬಣ್ಣಿಸಿದರು. ಈ ಯೋಜನೆಯು ಪ್ರಧಾನಿ ನರೇಂದ್ರ ಮೋದಿಯವರ ಮೇಕ್ ಇನ್ ಇಂಡಿಯಾ ದೃಷ್ಟಿಕೋನಕ್ಕೆ ಪೂರಕವಾಗಿದ್ದು, ದೇಶದ ಸೃಜನಶೀಲ ಆರ್ಥಿಕತೆಯನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ಅವರು ಹೇಳಿದರು.

**********

ಜಮ್ಮು ಮತ್ತು ಕಾಶ್ಮೀರ ಮತ್ತು ಲಡಾಖ್ ಕೇಂದ್ರಾಡಳಿತ ಪ್ರದೇಶಗಳನ್ನು ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿಯಲ್ಲಿರುವ ಜೋಜಿಲಾ ಪಾಸ್‌ನಲ್ಲಿ ವಾಹನಗಳು ಹಿಮಪಾತಕ್ಕೆ ಸಿಲುಕಿ ಏಳು ಜನರು ಸಾವನ್ನಪ್ಪಿದ್ದು, ಹಲವಾರು ಜನರು ಗಾಯಗೊಂಡಿದ್ದಾರೆ. ಘಟನೆಯ ನಂತರ ರಕ್ಷಣಾ ಕಾರ್ಯಾಚರಣೆಯನ್ನು ತಕ್ಷಣವೇ ಪ್ರಾರಂಭಿಸಲಾಯಿತು ಮತ್ತು ಹಿಮವನ್ನು ತೆರವುಗೊಳಿಸುವ ಪ್ರಯತ್ನಗಳು ಮುಂದುವರಿದಿವೆ. ಘಟನೆಯಲ್ಲಿ ಏಳು ಜನರು ಸಾವನ್ನಪ್ಪಿರುವ ಬಗ್ಗೆ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಕೇಂದ್ರ ಸಚಿವ ಜಿತೇಂದ್ರ ಸಿಂಗ್ ದೃಢಪಡಿಸಿದ್ದಾರೆ. ಘಟನೆಗೆ ಸಂತಾಪ ಸೂಚಿಸಿರುವ ಅವರು , ಗಾಯಾಳುಗಳಿಗೆ ಅಗತ್ಯವಿರುವ ಎಲ್ಲಾ ಸಹಾಯವನ್ನು ಒದಗಿಸಲಾಗುತ್ತಿದೆ ಎಂದು ಹೇಳಿದರು.ಲಡಾಖ್ ಲೆಫ್ಟಿನೆಂಟ್ ಗವರ್ನರ್ ವಿನಯ್ ಕುಮಾರ್ ಸಕ್ಸೇನಾ ಕೂಡ ಈ ಘಟನೆಯ ಬಗ್ಗೆ ದುಃಖ ವ್ಯಕ್ತಪಡಿಸಿದ್ದಾರೆ.

*****END*****